# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ಸಂಖ್ಯೆ:ತು.ವಿ:ಶೈ.ವಿ:ಪಿ.ಜಿ:2025–26 | 1739

ದಿನಾಂಕ:01.09.2025

## ಸುತ್ತೋಲೆ

**ವಿಷಯ: 2025–26 ನೇ ಶೈಕ್ಷಣಿಕ ಸಾಲಿಗೆ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಿದ್ದು, ಪ್ರವೇಶಾತಿ ಅರ್ಜಿ ಶುಲ್ಕದ ಕುರಿತು.**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2025–26 ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶಾತಿಗಾಗಿ ಅರ್ಜಿಯನ್ನು ಆಹ್ವಾನಿಸಿದ್ದು, ಪ್ರವೇಶಾತಿ ಅರ್ಜಿ ಶುಲ್ಕ ಸಾಮಾನ್ಯ ವರ್ಗಕ್ಕೆ ರೂ300/– ಮತ್ತು ಎಸ್.ಸಿ, ಎಸ್.ಟಿ ಮತ್ತು ಪ್ರವರ್ಗ–1 ವಿದ್ಯಾರ್ಥಿಗಳಿಗೆ ರೂ.150/– ನಿಗದಿಪಡಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಪ್ರವೇಶಾತಿ ಅರ್ಜಿ ಶುಲ್ಕ ಪಾವತಿ ಕುರಿತಂತೆ ಕೆಲವು ವಿದ್ಯಾರ್ಥಿಗಳು ಯುಯುಸಿಎಂಎಸ್ ಮುಖಾಂತರ ಆನ್‌ಲೈನ್‌ನಲ್ಲಿ ಪಾವತಿಸುತ್ತಿದ್ದು, ಈ ಹಿಂದಿನ ಶೈಕ್ಷಣಿಕ ಸಾಲುಗಳಲ್ಲಿ ಇದೇ ರೀತಿ ಪಾವತಿಸಿದ್ದು ಸದರಿ ಶುಲ್ಕದ ಮಾಹಿತಿಯು ಇದುವರೆಗೂ ವಿಶ್ವವಿದ್ಯಾನಿಲಯಕ್ಕೆ ಸ್ವೀಕೃತವಾಗಿರುವುದಿಲ್ಲ. ಈ ಸಂಬಂಧ ಹಣಕಾಸು ವಿಭಾಗದಿಂದ ಹಾಗೂ ಲೆಕ್ಕಪರಿಶೋಧನೆಯಿಂದ ಆಕ್ಷೇಪಣೆಯಾಗುತ್ತಿದೆ. ಆದ್ದರಿಂದ ಪ್ರಸ್ತುತ ಶೈಕ್ಷಣಿಕ ಸಾಲಿಗೆ ಕಡ್ಡಾಯವಾಗಿ ಎಸ್.ಬಿ ಕಲೆಕ್ಟ್ ಮುಖಾಂತರ ಹಣಕಾಸು ಅಧಿಕಾರಿಗಳ ಖಾತೆಗೆ ಅರ್ಜಿ ಶುಲ್ಕವನ್ನು ಪಾವತಿಸುವಂತೆ ವಿದ್ಯಾರ್ಥಿಗಳಿಗೆ ತಿಳಿಸುವುದು. ಒಂದು ವೇಳೆ ಈಗಾಗಲೇ ಯುಯುಸಿಎಂಎಸ್ ಮುಖಾಂತರ ಆನ್‌ಲೈನ್‌ನಲ್ಲಿ ಪ್ರವೇಶ ಅರ್ಜಿ ಶುಲ್ಕ ಪಾವತಿಸಿದ್ದಲ್ಲಿ ಅಂತಹ ವಿದ್ಯಾರ್ಥಿಗಳಿಂದ ಕೌನ್ಸಿಲಿಂಗ್ ದಿನಾಂಕದ ಒಳಗಾಗಿ ಅಥವಾ ಕೌನ್ಸಿಲಿಂಗ್ ಸಮಯದಲ್ಲಿ ಎಸ್.ಬಿ ಕಲೆಕ್ಟ್ ಮುಖಾಂತರ ಹಣಕಾಸು ಅಧಿಕಾರಿಗಳ ಖಾತೆಗೆ ಮತ್ತೊಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿಕೊಳ್ಳುವಂತೆ ತಿಳಿಸಲಾಗಿದೆ.

ಸಹಿ/– 2.09.2025
ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು. ವಿಶ್ವವಿದ್ಯಾನಿಲಯ, ತುಮಕೂರು
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು.

ಪ್ರತಿಗಳು:

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು– ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ,
3. ಕಚೇರಿ ಪ್ರತಿ